**ಓ ಎಸ್ ನಂಃ 558-14**
**ಪಿ ಡಬ್ಲ್ಯೂ ಃ 1**

**ದಿಃ 27-01-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ** ವಾದಿ ಪರ ಶ್ರೀ ಎಸ್ ಸಿ ಆರ್ ವಕೀಲರಿಂದ

**11.** ನಾನು ವಿಧವಾ ವೇತನ ಮಂಜೂರಾತಿ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನೋಡಿದರೆ ಗುರುತಿಸುತ್ತೇನೆ ಅದನ್ನು ನಿಪಿ **5** ಎಂದು ಗುರುತಿಸಲಾಯಿತು. ನಾನು ನನ್ನ ಮದುವೆಯ ಆಮಂತ್ರಣ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನೋಡಿದರೆ ಗುರುತಿಸುತ್ತೇನೆ. ಪ್ರತಿವಾದಿ ಪರ ವಕೀಲರು ಸದರಿ ದಾಖಲಾತಿಯನ್ನು ಗುರುತಿಸಲು ತಕರಾರು ಮಾಡಿದ್ದು ಸದರಿ ದಾಖಲಾತಿಯನ್ನು ತಕರಾರಿಗೆ ಒಳಪಟ್ಟು ನಿಪಿ **6** ಎಂದು ಗುರುತಿಸಲಾಯಿತು. ನಾನು ರಾವುಗೊಂಡ್ಲು ವ್ಯವಸಾಯ ಸೇವಾ ಸಹಕಾರ ಸಂಘದವರು ಕೊಟ್ಟಿರುವ ಗುರುತಿನ ಚೀಟಿಯನ್ನು ಹಾಜರುಪಡಿಸಿದ್ದು ಸದರಿ ಗುರುತಿನ ಚೀಟಿಯನ್ನು ನೋಡಿದರೆ ಗುರುತಿಸುತ್ತೇನೆ ಅದನ್ನು ನಿಪಿ **7** ಎಂದು ಗುರುತಿಸಲಾಯಿತು. ಪೋಲಿಸರು ನನಗೆ ನೀಡಿರುವ ಸ್ವೀಕೃತಿಯನ್ನು ಹಾಜರುಪಡಿಸಿದ್ದು ನೋಡಿದರೆ ಗುರುತಿಸುತ್ತೇನೆ ಅದನ್ನು ನಿಪಿ **8** ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಮುಂದುವರೆಸಲು ಕಾಲವಕಾಶ ಕೋರಿದ್ದಾರೆ ನೀಡಲಾಗಿದೆ.

**(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
**ಮಾಗಡಿ.**